ಸಿರಿಬಾಗಿಲು ಪ್ರದೇಶದಿಂದ ಈ ಬಗ್ಗೆ ದೂರು ಬಂದಿತ್ತು. ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದೇನೆ. ಮಕ್ಕಳು ಶಾಲೆಗೆ ಹೋಗದೇ

ಕ್ಷೇತ್ರದಲ್ಲಿ ಚುನಾವಣೆ ನಡೆಯುತ್ತಿರುವುದರಿಂದ ಸಮಾಜದ ಉನ್ನತ ವ್ಯಕ್ತಿಗಳು ಕೆಟ್ಟ ಅಭಿಪ್ರಾಯ ಸೂಚಿಸಿದ್ದಾರೆ.

ಇದೆ. ಹಿರಿಯರು ಬಂದರೆ ಶೌಚಾಲ
ಕೂಡಲೇ ಕ್ರಮ ಕೈಗೊಳ್ಳುವಂತೆ ಅಧ್ಯ

# ಧಾರ್ಮಿಕ ಶಿಕ್ಷಣದಿಂದ ಸುಸಂಸ್ಕೃತ ಸಮಾಜ



ಸುಬ್ರಹ್ಮಣ್ಯ ಪಪೂ ಕಾಲೇಜು ವಾರ್ಷಿಕೋತ್ಸವದಲ್ಲಿ ಸುಬ್ರಹ್ಮಣ್ಯ ಶ್ರೀ ಆಶೀರ್ವಚನ ನೀಡಿದರು.

**ಸುಬ್ರಹ್ಮಣ್ಯ:** ಧಾರ್ಮಿಕ, ಸಾಂಸ್ಕೃತಿಕ ಹಿನ್ನೆಲೆಯುಳ್ಳ ಶಿಕ್ಷಣದಿಂದ ಉತ್ತಮ ರೀತಿಯ ವಿದ್ಯಾರ್ಥಿ ಬದುಕನ್ನು ಕಂಡುಕೊಳ್ಳಲು ಸಾಧ್ಯ. ಇದರಿಂದ ಸುಸಂಸ್ಕೃತ ಸಮಾಜ ನಿರ್ಮಾಣವಾಗುತ್ತದೆ ಎಂದು ಸುಬ್ರಹ್ಮಣ್ಯ ಮಠದ ಶ್ರೀ ವಿದ್ಯಾಪ್ರಸನ್ನತೀರ್ಥ ಶ್ರೀಪಾದರು ಹೇಳಿದರು.

ಸುಬ್ರಹ್ಮಣ್ಯ ಪದವಿಪೂರ್ವ ಕಾಲೇಜಿನ ದ್ವಿದಿನ ವಾರ್ಷಿಕೋತ್ಸವ ನಿಮಿತ್ತ ಶುಕ್ರವಾರ ಸಮಾರಂಭದಲ್ಲಿ ಆಶೀರ್ವಚನ ನೀಡಿದರು.

ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಕೃಷ್ಣಪ್ರಸಾದ್ ಮಡ್ತಿಲ ಅಧ್ಯಕ್ಷತೆ ವಹಿಸಿದ್ದರು. ಸಮಿತಿ ಸದಸ್ಯ ಚಂದ್ರಶೇಖರ ತಳೂರ್, ವನಜಾ ವಿ. ಭಟ್, ಗ್ರಾಪಂ ಉಪಾಧ್ಯಕ್ಷ ಮನೋಹರ ನಾಳ, ಬಾಳಿಲ ವಿದ್ಯಾಬೋಧಿನಿ ಪ್ರೌಢಶಾಲೆ ಮುಖ್ಯಗುರು ಶಿವರಾಮ ಶಾಸ್ತ್ರಿ, ಕಾಲೇಜಿನ ಸ್ಥಾಪಕ ಪ್ರಾಚಾರ್ಯ ಎಂ.ಮಹಾಬಲ ಶೆಟ್ಟಿ ಮುಖ್ಯ ಅತಿಥಿಯಾಗಿದ್ದರು.

ಶಿಕ್ಷಕ-ರಕ್ಷಕ ಸಂಘದ ಅಧ್ಯಕ್ಷರಾದ ಗೋಪಿನಾಥ್ ನಂಬೀಶ ಮತ್ತು ದೇವಣ್ಣ ಗೌಡ, ಹಿರಿಯ ವಿದ್ಯಾರ್ಥಿ ಸಂಘದ ಅಧ್ಯಕ್ಷ ಕಿಶೋರ್ ಕುಮಾರ್ ಕೂಜುಗೋಡು, ವಿದ್ಯಾರ್ಥಿ ನಾಯಕ ಹರ್ಷಿತ್, ಅನುಷಾ ಕಾಮತ್, ಪ್ರಣವ್ ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಕೆ.ಯಶವಂತ ರೈ ಅವರನ್ನು ಕಾಲೇಜು ವತಿಯಿಂದ ಗೌರವಿಸಲಾಯಿತು. ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಪ್ರಾಚಾರ್ಯ ವಸಂತ ಶೆಟ್ಟಿ ವಾರ್ಷಿಕ ವರದಿ ವಾಚಿಸಿದರು. ಉಪಪ್ರಾಚಾರ್ಯ ಬಿ. ವಿಠಲ ರಾವ್ ಸ್ವಾಗತಿಸಿದರು. ಪ್ರೌಢಶಾಲಾ ವಿಭಾಗದ ಮುಖ್ಯಗುರು ಕೆ.ಯಶವಂತ ರೈ ವಂದಿಸಿದರು. ಉಪನ್ಯಾಸಕ ಸೋಮಶೇಖರ ನಾಯಕ್ ಕಾರ್ಯಕ್ರಮ ನಿರೂಪಿಸಿದರು.

ಕಿನಲ್ಲಿ
ಹುದ್ದೆ

**ನ್ಯೂಸ್ ಲೈನ್** ಇಂದು ಕಾಸರಗೋಡು ನುಳ್ಳಿಪ್ಪಾಡಿ ಶ್ರೀ ಅಯ್ಯಪ್ಪ ಸ್ವಾಮಿ ಕ್ಷೇತ್ರ

## ಸಂಕೀರ್ತನಾ ಮೆರವಣಿಗೆ

